## 9. <u>ಲಿಖಿತ ಪರೀಕ್ಷೆ:</u>

ಎ) **ಅಭ್ಯರ್ಥಿಯು ಸಹಿಷ್ಣುತೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು**. ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಆಯ್ಕೆ ಸಮಿತಿಯು ನಿಗದಿಪಡಿಸಿದ ಕೇಂದ್ರದಲ್ಲಿ ನಡೆಸಲಾಗುವುದು. ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.

ಬಿ) **ಅಭ್ಯರ್ಥಿಗಳು ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಹೊಂದಿರುವ** ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಖುದ್ದಾಗಿ ಯಾವುದೇ ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಕಳುಹಿಸಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಲಿಖಿತ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಲಿಖಿತ ಪರೀಕ್ಷೆಯ ಕೇಂದ್ರದ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಹಾಜರಾಗುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪ್ಯಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

ix) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

x) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.( AADHAR CARD).

ಸಿ) ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು i) ಲಿಖಿತ ಪರೀಕ್ಷೆಯ ಕರೆಪತ್ರ, ii) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಡಿ) **<u>ಲಿಖಿತ ಪರೀಕ್ಷೆಯು ಪದವಿ ಮಟ್ಟದ ಎರಡು ಪತ್ರಿಕೆಗಳದ್ದಾಗಿರುತ್ತದೆ.</u>**

**ಪತ್ರಿಕೆ–1** : ಈ ಪತ್ರಿಕೆಯು ಎರಡು ಭಾಗಗಳನ್ನೊಳಗೊಂಡಿರುತ್ತದೆ. ಒಂದನೇ ಭಾಗವು ಕನ್ನಡ ಅಥವಾ ಇಂಗ್ಲೀಷ್‌ನಲ್ಲಿ ಪ್ರಬಂಧ ಬರೆಯುವುದಿರುತ್ತದೆ. ಇದಕ್ಕೆ 20 ಅಂಕಗಳು ಹಾಗೂ ಸಾರಾಂಶ ಬರಹಕ್ಕೆ 10 ಅಂಕಗಳಿರುತ್ತವೆ ಮತ್ತು ಎರಡನೇ ಭಾಗವು ಕನ್ನಡ ಭಾಷೆಯಿಂದ ಇಂಗ್ಲೀಷ್ ಭಾಷೆಗೆ ಹಾಗೂ ಇಂಗ್ಲೀಷ್ ಭಾಷೆಯಿಂದ ಕನ್ನಡ ಭಾಷೆಗೆ ಭಾಷಾಂತರಿಸುವುದು, ಪ್ರತಿ ಭಾಷಾಂತರಕ್ಕೆ 10 ಅಂಕಗಳು. ಈ ಪರೀಕ್ಷೆಯ ಅವಧಿ ಒಂದೂವರೆ ಗಂಟೆಗಳಾಗಿದ್ದು, 50 ಅಂಕಗಳನ್ನು ಹೊಂದಿರುತ್ತದೆ. (30 ಅಂಕಗಳು ಪ್ರಬಂಧ ಮತ್ತು ಸಾರಾಂಶ ಬರಹಕ್ಕೆ ಹಾಗೂ 20 ಅಂಕಗಳು ಭಾಷಾಂತರಕ್ಕೆ) ಇದರಲ್ಲಿ ಕನಿಷ್ಠ ಅಂಕಗಳು ಇರುವುದಿಲ್ಲ.

**ಪತ್ರಿಕೆ–2**: ಈ ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿದ್ದು, ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆಯ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಇದರಲ್ಲಿ

ಪ್ರಚಲಿತ ವಿದ್ಯಮಾನಗಳು, ಸಾಮಾನ್ಯ ಜ್ಞಾನ, ಸಾಮಾನ್ಯ ಅಧ್ಯಯನ, ವಿಜ್ಞಾನ, ಭೂಗೋಳ, ಇತಿಹಾಸ, ಭಾರತಿಯ ಸಂವಿಧಾನ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ ಮತ್ತು ಸಾಮಾನ್ಯ ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಗಳಿಗೆ ಸಂಬಂಧಪಟ್ಟಿರುತ್ತವೆ. ಇದರಲ್ಲಿ ಹೆಚ್ಚಿನ ಪ್ರಶ್ನೆಗಳು ಎಲೆಕ್ಟ್ರಾನಿಕ್ಸ್ ಒಳಗೊಂಡಂತೆ ವಿಜ್ಞಾನ ವಿಷಯಗಳಿಗೆ ಸಂಬಂಧಿಸಿದವುಗಳಾಗಿರುತ್ತವೆ. ಈ ಪ್ರಶ್ನೆ ಪತ್ರಿಕೆಗೆ 150 ಅಂಕಗಳಿದ್ದು, ಕನಿಷ್ಠ ಅಂಕಗಳು ಇರುವುದಿಲ್ಲ. ಇದರ ಕಾಲಾವಧಿ ಒಂದೂವರೆ ಗಂಟೆಗಳು. ಪ್ರತಿ ತಪ್ಪು ಉತ್ತರಕ್ಕೆ ಅಂತಹುದೇ ಪ್ರಶ್ನೆಯ ಸರಿ ಉತ್ತರದ 25% (.375) ರಷ್ಟು ಅಂಕಗಳನ್ನು ಕಳೆಯಲಾಗುವುದು. ಅಭ್ಯರ್ಥಿಗಳು ಎರಡು ಪತ್ರಿಕೆಗಳಿಗೂ ಹಾಜರಾಗುವುದು ಕಡ್ಡಾಯವಾಗಿರುತ್ತದೆ.

**<u>ಸೂಚನೆಗಳು:</u>**

i) ಅಭ್ಯರ್ಥಿಗಳು ಪತ್ರಿಕೆ–1 ರಲ್ಲಿನ ಪ್ರಬಂಧ ಬರಹವನ್ನು ಇಂಗ್ಲೀಷ್ ಅಥವಾ ಕನ್ನಡದಲ್ಲಿ ಉತ್ತರಿಸಬಹುದು.

ii) ಪತ್ರಿಕೆ–1ರ ಉತ್ತರ ಪತ್ರಿಕೆಗಳನ್ನು ಗಣಕೀಕೃತ ಮೌಲ್ಯಮಾಪನ ಮಾಡಬಹುದು. ಸದರಿ ಪ್ರಕ್ರಿಯೆಯನ್ನು ನಡೆಸುವ ಕುರಿತು ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ / ಅಧ್ಯಕ್ಷರವರ ತೀರ್ಮಾನವೇ ಅಂತಿಮವಾಗಿರುತ್ತದೆ.

iii) ಪ್ರಶ್ನೆ ಪತ್ರಿಕೆ–2 ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದ್ದಾಗಿರುತ್ತದೆ.

iv) ಪ್ರಶ್ನೆ ಪತ್ರಿಕೆ–2ರ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು/ ನೀಲಿ** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಅಭ್ಯರ್ಥಿಯು ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ), ಅರ್ಜಿ ಸಂಖ್ಯೆ. ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಮಾಡಬೇಕು. ಇದನ್ನು ಭರ್ತಿ ಮಾಡದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿಯು ಆಯ್ಕೆಗೆ ಅನರ್ಹನಾಗುತ್ತಾನೆ. ಆದ್ದರಿಂದ ಅಭ್ಯರ್ಥಿಯು ಸರಿಯಾಗಿ ಮಾಹಿತಿಯನ್ನು ಭರ್ತಿ ಮಾಡಬೇಕು.

v) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು ಇಲ್ಲವಾದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

vi) ಅರ್ಜಿ ಸಂಖ್ಯೆ, ರೋಲ್ ನಂ, ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಉತ್ತರ ಪತ್ರಿಕೆಗಳಲ್ಲಿ ಭರ್ತಿ ಮಾಡದೆ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿ ಮನವಿ ಸಲ್ಲಿಸಿದಲ್ಲಿ ಅಂತಹ ಮನವಿಯನ್ನು ಪರಿಗಣಿಸಲಾಗುವುದಿಲ್ಲ.

vii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ, ಸಹಿ, ಎಡಗೈ ಹೆಬ್ಬೆಟ್ಟಿನ ಗುರುತು ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

viii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

ix) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನು / ಟ್ಯಾಬಲೆಟ್ / ಐ–ಪೋಡ್‌ಗಳನ್ನು ನಿಷೇಧಿಸಲಾಗಿದೆ. ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.ಪರೀಕ್ಷೆ ಬರೆಯುವಾಗ ಮೇಲಿನ ಯಾವುದೇ ವಸ್ತುಗಳನ್ನು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

x) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ/ಸಂದೇಹ ಉಂಟಾದಲ್ಲಿ ಕನ್ನಡ/ಇಂಗ್ಲೀಷ್ ಭಾಗವನ್ನು ನೋಡುವುದು. ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ದೋಷ ಅಂದರೆ ಮುದ್ರಣ ದೋಷ, ಪುಟಗಳ ಅದಲು ಬದಲು, ಪ್ರಶ್ನೆಗಳ ಪುನರಾವರ್ತನೆ, ಯಾವುದಾದರೂ ಪುಟಗಳು ಇಲ್ಲದಿದ್ದಲ್ಲಿ ಮತ್ತು ಇನ್ನಾವುದೇ ದೋಷ ಕಂಡು ಬಂದಲ್ಲಿ ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು

ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡು ಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.